ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಸಕ್ಕರೆ ಕಾರ್ಖಾನೆಗಳಿಂದ ಪರಿಸರ ಹಾನಿಗೊಳಗಾದವರಿಗೆ ಪರಿಹಾರದ ಬಗ್ಗೆ

ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು)

138 (1054) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿ ಸಕ್ಕರೆ ಕಾರ್ಖಾನೆಗಳು ಪ್ರಾರಂಭವಾದ ನಂತರ ಅದರ ಸುತ್ತಮುತ್ತಲಿನ ಪ್ರದೇಶಗಳು ಪರಿಸರ ಹಾನಿಗೆ ಒಳಗಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ಈ ರೀತಿ ಪರಿಸರ ಹಾನಿಗೆ ಒಳಗಾದ ಭೂಮಿಯ ಮಾಲೀಕರಿಗೆ ಸರ್ಕಾರವು ನೀಡಿರುವ ಪರಿಹಾರವೇನು ; ಹಾಗಿಲ್ಲದಿದ್ದಲ್ಲಿ ಪರಿಹಾರ ನೀಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಇ) ಪರಿಸರ ಹಾನಿಗೆ ಒಳಗಾದ ಜಮೀನಿನ ಮಾಲೀಕರಿಗೆ ಪುನರ್ವಸತಿಗಾಗಿ ಇದುವರೆಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; ಇದಕ್ಕಾಗಿ ಸರ್ಕಾರ ಹಾಕಿಕೊಂಡಿರುವ ಯೋಜನೆಗಳೇನು ? (ಕಾರ್ಖಾನೆವಾರು ವಿವರ ನೀಡುವುದು)